# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | 489 |
| **ಮಾನ್ಯ ಸದಸ್ಯರ ಹೆಸರು** | : | ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) |
| **ಉತ್ತರಿಸಬೇಕಾದ ದಿನಾಂಕ** | : | 12.12.2024 |
| **ಉತ್ತರಿಸುವ ಸಚಿವರು** | : | ಮಾನ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರವಾಸೋದ್ಯಮ ಇಲಾಖೆಯಲ್ಲಿ ಯಾವ ಯಾವ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ; ಈ ಯೋಜನೆಗಳಿಗೆ ನಿಗದಿಪಡಿಸಿರುವ ಅನುದಾನವು ಎಷ್ಟು ; | ಪ್ರಸಕ್ತ ಸಾಲಿನಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ರಾಜ್ಯದ ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸಲು ಹಾಗೂ ಪ್ರವಾಸಿಗರಿಗೆ ಅನುಕೂಲ ಕಲ್ಪಿಸಲು ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ವಿವರವನ್ನು **<u>ಅನುಬಂಧ-1</u>** ರಲ್ಲಿ ಒದಗಿಸಿದೆ.<br><br>ರಾಜ್ಯ ಸರ್ಕಾರವು ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸಲು ಹಾಗೂ ಉತ್ತೇಜಿಸಲು ಪ್ರಸ್ತುತ ಸಾಲಿನ ಆಯವ್ಯಯದಲ್ಲಿ ಪ್ರವಾಸೋದ್ಯಮ ಇಲಾಖೆಗೆ ವಿವಿಧ ಲೆಕ್ಕಶೀರ್ಷಿಕೆಗಳಡಿ ರೂ.144.90 ಲಕ್ಷಗಳನ್ನು ಒದಗಿಸಿರುತ್ತದೆ. ವಿವರವನ್ನು **<u>ಅನುಬಂಧ-2</u>** ರಲ್ಲಿ ಒದಗಿಸಿದೆ.<br><br>ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯಲ್ಲಿ ಪ್ರಸ್ತುತ ಇರುವ ಯೋಜನೆಗಳ ವಿವರ ಈ ಕೆಳಕಂಡಂತಿದೆ;<br><br>**<u>ಸಂರಕ್ಷಣಾ</u>**: ಕರ್ನಾಟಕ ರಾಜ್ಯಾದ್ಯಂತ ಅವಜ್ಞತೆಗೆ ತುತ್ತಾಗಿರುವ ಅನೇಕ ಅರಕ್ಷಿತ ಸ್ಮಾರಕಗಳು ಮತ್ತು ಇತರೆ ಪ್ರಾಚ್ಯಾವಶೇಷಗಳನ್ನು ಗುರುತಿಸಿ ಸಂರಕ್ಷಿಸಲು ಮತ್ತು ಅರಕ್ಷಿಯ ಸ್ಮಾರಕಗಳನ್ನು ರಕ್ಷಿತ ಸ್ಮಾರಕಗಳೆಂದು ಘೋಷಿಸಲು ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಸಹಯೋಗದೊಂದಿಗೆ ಹಾಗೂ ಪುರಾತತ್ವ ವಿಷಯಗಳಲ್ಲಿ ಪರಿಣಿತಿ ಹೊಂದಿರುವ ತಜ್ಞರ ಸಹಯೋಗದೊಂದಿಗೆ ಗ್ರಾಮಾವಾರು ಸರ್ವೆ ಕಾರ್ಯವನ್ನು ಕೈಗೊಳ್ಳಲಾಗಿದೆ.<br><br>ಈ ಯೋಜನೆಯಡಿಯಲ್ಲಿ 2023-24ನೇ ಸಾಲಿನಲ್ಲಿ ಒಟ್ಟು 58 ತಾಲ್ಲೂಕುಗಳ ಗ್ರಾಮವಾರು ಸರ್ವೇಕಾರ್ಯವನ್ನು ಕೈಗೊಳ್ಳಲಾಗಿದ್ದು, ಪ್ರಸ್ತುತ 2024-25ನೇ ಸಾಲಿನಲ್ಲಿ 59 ತಾಲ್ಲೂಕುಗಳ |

| | | |
|---|---|---|
| | | ಗ್ರಾಮವಾರು ಸರ್ವೇಕಾರ್ಯವನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ.<br><br>**ಪ್ರಾಚ್ಯಪ್ರಜ್ಞೆ:** ರಾಜ್ಯದಲ್ಲಿನ ಪಾರಂಪರಿಕ ಕಟ್ಟಡಗಳು, ಸ್ಮಾರಕಗಳು, ಶಾಸನಗಳು, ದೇವಸ್ಥಾನ, ಮಸೀದಿ, ಚರ್ಚ್‌ಗಳು, ಇತ್ಯಾದಿಗಳ ಇತಿಹಾಸ, ಪ್ರಾಮುಖ್ಯತೆ ಮತ್ತು ಪರಂಪರೆಯ ಬಗ್ಗೆ ಶಾಲಾ ಮಕ್ಕಳಿಗೆ ಪೌಢಶಾಲಾ ಹಂತದಲ್ಲಿಯೇ ಅರಿವು ಮತ್ತು ಜಾಗೃತಿ ಮೂಡಿಸಲು ತಾಲ್ಲೂಕು ಮತ್ತು ಜಿಲ್ಲಾ ಮತ್ತು ರಾಜ್ಯ ಮಟ್ಟದಲ್ಲಿ ಭಾಷಣ, ಚಿತ್ರಕಲೆ, ಪ್ರಬಂಧ ಮತ್ತು ರಸಪ್ರಶ್ನೆ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು.<br><br>**ಸ್ಮಾರಕ ದತ್ತು ಯೋಜನೆ** : ಕರ್ನಾಟಕ ರಾಜ್ಯದಲ್ಲಿರುವ ಇತಿಹಾಸ ಪ್ರಸಿದ್ಧ ಸ್ಮಾರಕಗಳನ್ನು ಸಂರಕ್ಷಿಸಲು ಮತ್ತು ಮೂಲಭೂತ ಸೌಲಭ್ಯಗಳೊಂದಿಗೆ ಅಭಿವೃದ್ಧಿಪಡಿಸಲು Adopt A Monument ಯೋಜನೆಯನ್ನು ಜಾರಿಗೊಳಿಸಲಾಗಿರುತ್ತದೆ. ಈ ಯೋಜನೆಯಡಿಯಲ್ಲಿ ಒಟ್ಟು ನಾಲ್ಕು ಸಂಸ್ಥೆಯವರು 13 ಸ್ಮಾರಕಗಳ ಸಂರಕ್ಷಣೆಗೆ ಆಸಕ್ತಿ ವ್ಯಕ್ತಪಡಿಸಿರುತ್ತಾರೆ |
| ಆ) | ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗದ ಫಲಾನುಭವಿಗಳಿಗೆ ಲಘು ವಾಹನ ಮಂಜೂರಾತಿ ಯೋಜನೆಯಲ್ಲಿ ಎಷ್ಟು ಫಲಾನುಭವಿಗಳಿಗೆ ಸೌಲಭ್ಯ ಒದಗಿಸಲಾಗಿದೆ. | ಪ್ರವಾಸೋದ್ಯಮ ಇಲಾಖೆಯಲ್ಲಿ ಪ್ರಸ್ತುತ ಲಘುವಾಹನಗಳಿಗೆ ಮಂಜೂರಾತಿ ನೀಡುವ ಯೋಜನೆಗೆ ಅನುದಾನ ಬಿಡುಗಡೆಗೊಳಿಸಿರುವುದಿಲ್ಲ. |
| ಇ) | ಹಿರಿಯೂರು ವಿಧಾನಸಭಾ ಕ್ಷೇತ್ರಕ್ಕೆ ನೀಡಿರುವ ಯೋಜನೆಗಳು ಯಾವುವು ; (ಫಲಾನುಭವಿಗಳ ವಿವರ ನೀಡುವುದು) | ಹಿರಿಯೂರು ವಿಧಾನಸಭಾ ಕ್ಷೇತ್ರಕ್ಕೆ ಈ ಇಲಾಖೆಯ ವತಿಯಿಂದ ಫಲಾನುಭವಿಗಳ ಯೋಜನೆಗೆ ಅನುದಾನ ಬಿಡುಗಡೆಯಾಗಿರುವುದಿಲ್ಲ. |

**ಸಂಖ್ಯೆ:ಟಿಓಆರ್ 256 ಟಿಡಿವಿ 2024**

(ಎಚ್.ಕೆ. ಪಾಟೀಲ್)
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ
ಪ್ರವಾಸೋದ್ಯಮ ಸಚಿವರು

**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಡಿ.ಟಿ.ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:489ಕ್ಕೆ ಅನುಬಂಧ-1**

1. **ಪ್ರವಾಸೋದ್ಯಮ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು :**

- ಯಾತ್ರಿನಿವಾಸ / ಡಾರ್ಮಿಟರಿಗಳು
- ಕುಡಿಯುವ ನೀರಿನ ಸೌಲಭ್ಯ
- ಶೌಚಾಲಯಗಳು.
- ಸ್ನಾನಗೃಹಗಳು.
- ಪಾರ್ಕಿಂಗ್ ವ್ಯವಸ್ಥೆ
- ಪ್ರವಾಸಿ ಸೂಚನಾ ಫಲಕಗಳು
- ಆಸನಗಳ ವ್ಯವಸ್ಥೆ
- ಮೆಟ್ಟಿಲುಗಳು ಮತ್ತು ರೈಲಿಂಗ್ಸ್
- ಪರಗೋಲ
- ಪಾತ್ ವೇ, ಇತ್ಯಾದಿ
- ಪ್ರವಾಸಿ ತಾಣಗಳನ್ನು ಸಂಪರ್ಕಿಸುವ ಅಂತಿಮ ಹಂತದ ರಸ್ತೆಗಳನ್ನು ಅಭಿವೃದ್ಧಿಪಡಿಸುವುದು.
- ಪಾರಂಪರಿಕ ಕೋಟೆ, ಸ್ಮಾರಕಗಳು ಹಾಗೂ ಇತರೆ ಕಟ್ಟಡಗಳ ಸಂರಕ್ಷಣಾ ಕಾಮಗಾರಿಗಳು.
- ಕೆರೆ ಸೌಂದರೀಕರಣ.
- ಪ್ರವಾಸಿ ತಾಣಗಳಲ್ಲಿ ರೋಪ್ ವೇ ನಿರ್ಮಾಣ.
- ಪಾರಂಪರಿಕ ಪ್ರವಾಸಿ ತಾಣಗಳಲ್ಲಿ ಧ್ವನಿ ಮತ್ತು ಬೆಳಕು ಯೋಜನೆ ಅನುಷ್ಠಾನ.

2. **ಪ್ರವಾಸೋದ್ಯಮ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ಕಾರ್ಯಕ್ರಮಗಳ ವಿವರ:**

- ರಾಜ್ಯದ ಪ್ರವಾಸಿ ತಾಣಗಳನ್ನು ಪ್ರಚಾರಪಡಿಸಲು ರಾಷ್ಟ್ರ ಮಟ್ಟದಲ್ಲಿ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ನಡೆಯುವ ಮೇಳ ಹಾಗೂ ರೋಡ್ ಶೋಗಳಲ್ಲಿ ಭಾಗವಹಿಸುವುದು.
- ರಾಜ್ಯ ಪ್ರವಾಸಿ ತಾಣಗಳ ಬಗ್ಗೆ ಒಳಾಂಗಣ ಹಾಗೂ ಹೊರಾಂಗಣ ಪ್ರಚಾರವನ್ನು ವಿಮಾನ ನಿಲ್ದಾಣ, ಬಸ್ ನಿಲ್ದಾಣ, ರೈಲು ನಿಲ್ದಾಣ ಹಾಗೂ ಇತರೆ ಆಯ್ದ ಸ್ಥಳಗಳಲ್ಲಿ ಕೈಗೊಳ್ಳುವುದು.
- ರಾಜ್ಯದ ಪ್ರವಾಸಿ ತಾಣಗಳ ಪ್ರಚಾರಕ್ಕಾಗಿ ರಾಜ್ಯ ಮಟ್ಟದ ಹಾಗೂ ರಾಷ್ಟ್ರ ಮಟ್ಟದ ಪತ್ರಿಕೆಗಳು ಹಾಗೂ ಮ್ಯಾಗಜೀನ್‌ಗಳಲ್ಲಿ ಪ್ರಚಾರ ನೀಡುವುದು.
- ರಾಜ್ಯ ಮಟ್ಟದಲ್ಲಿ, ಜಿಲ್ಲಾ ಮಟ್ಟದಲ್ಲಿ ಹಾಗೂ ಪ್ರಮುಖ ಪ್ರವಾಸಿ ತಾಣಗಳಲ್ಲಿ ನಡೆಯುವ ಹಬ್ಬ ಹಾಗೂ ಉತ್ಸವಗಳಿಗೆ ಇಲಾಖೆಯ ಅನುದಾನ ಒದಗಿಸುವುದು ಹಾಗೂ ಸದರಿ ಹಬ್ಬ ಹಾಗೂ ಉತ್ಸವಗಳಲ್ಲಿ ಇಲಾಖೆಯ ಪರವಾಗಿ ಮಳಿಗೆ ತೆರೆದು ರಾಜ್ಯದ ಪ್ರವಾಸಿ ತಾಣಗಳನ್ನು ವ್ಯಾಪಕವಾಗಿ ಪ್ರಚಾರ ಮಾಡಲಾಗುವುದು.
- ಪ್ರವಾಸಿಗರ ಸುರಕ್ಷತೆಯ ದೃಷ್ಟಿಯಿಂದ ಪ್ರವಾಸಿ ತಾಣಗಳಲ್ಲಿ ಗೃಹ ರಕ್ಷಕ ದಳದ ಸಿಬ್ಬಂದಿಗಳಿಗೆ ತರಬೇತಿ ನೀಡಿ, **"ಪ್ರವಾಸಿ ಮಿತ್ರ"**ಗಳನ್ನಾಗಿ ಪ್ರವಾಸಿ ತಾಣಗಳಿಗೆ ನೇಮಿಸುವುದು.
- ಪ್ರವಾಸಿಗರಿಗೆ ಪ್ರವಾಸಿ ತಾಣಗಳ ಬಗ್ಗೆ ಮಾಹಿತಿಯನ್ನು ಒದಗಿಸಲು ಇಲಾಖೆಯಿಂದ ತರಬೇತಿ ನೀಡಿರುವ ಪ್ರವಾಸಿ ಮಾರ್ಗದರ್ಶಿಗಳ ನೋಂದಣಿ ಮಾಡಿ ಪರವಾಣಿಗೆ ನೀಡುವುದು.
- ಪ್ರವಾಸೋದ್ಯಮ ನೀತಿ -2020-23 ರಡಿ ಸಹಾಯಧನ, ರಿಯಾಯಿತಿ ಮತ್ತು ಉತ್ತೇಜನಗಳಿಗಾಗಿ ಬರುವ ಪ್ರಸ್ತಾವನೆಗಳಿಗೆ ಅನುಮೋದನೆ ನೀಡುವುದು.
- ರಾಜ್ಯದ ಪ್ರವಾಸಿಗರಿಗೆ ಪ್ರವಾಸ ಕೈಗೊಳ್ಳಲು ಅನುಕೂಲವಾಗುವಂತೆ ರಾಜ್ಯದ ನಾನಾ ಕಡೆಗಳಿಂದ "ಟ್ರಾವೆಲ್ ಏಜೆನ್ಸಿ"ಯಾಗಿ ಕಾರ್ಯನಿರ್ವಹಿಸಲು ಬರುವ ಪ್ರಸ್ತಾವನೆಗಳಿಗೆ ಅನುಮೋದನೆ ನೀಡುವುದು.

- ಪ್ರವಾಸಿ ತಾಣಗಳ ಬಳಿ ಪ್ರವಾಸಿಗರಿಗೆ ಆತಿಥ್ಯ ಸೇವೆಯನ್ನು ಒದಗಿಸಲು ಮುಂದೆ ಬರುವ ಮನೆ ಮಾಲೀಕರುಗಳಿಗೆ "ಹೋಂ ಸ್ಟೇ"ನ ಯೋಜನೆಯಡಿ ನೋಂದಣಿ ಮಾಡಲಾಗುವುದು.
- ಎಸ್.ಸಿ.ಎಸ್.ಪಿ / ಟಿ.ಎಸ್.ಪಿ ಯೋಜನೆಯಡಿ ರಾಜ್ಯದ ಸರ್ಕಾರಿ ಪ್ರೌಢ ಶಾಲೆಗಳಲ್ಲಿ, ಮೊರಾರ್ಜಿ ದೇಸಾಯಿ ಹಾಗೂ ಕ್ರೈಸ್ ವಸತಿ ಶಾಲೆಗಳಲ್ಲಿ 8ನೇ ತರಗತಿಯಲ್ಲಿ ಕಲಿಯುತ್ತಿರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಸರ್ಕಾರಿ ಪ್ರೌಢ ಶಾಲೆಗಳಲ್ಲಿ 8ನೇ ತರಗತಿಯಲ್ಲಿ ಕಲಿಯುತ್ತಿರುವ, ವಿದ್ಯಾರ್ಥಿಗಳಿಗೆ 'ಕರ್ನಾಟಕ ದರ್ಶನ' ಪ್ರವಾಸ ಕಾರ್ಯಕ್ರಮವನ್ನು ಏರ್ಪಡಿಸುವುದು.
- ಎಸ್.ಸಿ.ಎಸ್.ಪಿ / ಟಿ.ಎಸ್.ಪಿ ಯೋಜನೆಯಡಿ ಪ್ರವಾಸೋದ್ಯಮ ಹಾಗೂ ಆತಿಥ್ಯ ಕ್ಷೇತ್ರದಲ್ಲಿ ಸಣ್ಣ ಉದ್ಯಮಿದಾರರನ್ನು ಉತ್ತೇಜಿಸಲು ಒಂದು ತಿಂಗಳ ಕೌಶಲ್ಯಾಭಿವೃದ್ಧಿ ತರಬೇತಿ ನೀಡುವ ಕಾರ್ಯಕ್ರಮ ಹಾಗೂ ಸದರಿ ತರಬೇತಿ ಪಡೆದವರಿಗೆ ಮೊಬೈಲ್ ಕ್ಯಾಂಟೀನ್ ಖರೀಧಿಸಲು ಸಹಾಯಧನ ಕಾರ್ಯಕ್ರಮ.
- ಎಸ್.ಸಿ.ಎಸ್.ಪಿ / ಟಿ.ಎಸ್.ಪಿ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಪ್ರವಾಸೋದ್ಯಮ/ ಆತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮ.
- ಎಸ್.ಸಿ.ಎಸ್.ಪಿ / ಟಿ.ಎಸ್.ಪಿ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಪ್ರವಾಸಿ ಮಾರ್ಗದರ್ಶಿ ತರಬೇತಿ ಸದರಿ ತರಬೇತಿ ಪಡೆದ ಅಭ್ಯರ್ಥಿಗಳಿಗೆ ಜಾಕೆಟ್ (Jacket) ಹಾಗೂ ಒಂದು ಜೊತೆ ಸ್ಪೋರ್ಟ್ಸ್ ಶೂ (Sports Shoe) ವಿತರಿಸುವ ಕಾರ್ಯಕ್ರಮ

******

**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಡಿ.ಟಿ.ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:489ಕ್ಕೆ ಅನುಬಂಧ-2**

**ರಾಜ್ಯ ಸರ್ಕಾರವು ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸಲು ಪ್ರಸ್ತುತ ಸಾಲಿನ ಆಯವ್ಯಯದಲ್ಲಿ ಪ್ರವಾಸೋದ್ಯಮ ಇಲಾಖೆಗೆ ವಿವಿಧ ಲೆಕ್ಕಶೀರ್ಷಿಕೆಗಳಡಿ ಒದಗಿಸಿರುವ ಅನುದಾನದ ವಿವರ:**

(ರೂ.ಕೋಟಿಗಳಲ್ಲಿ)

| ಕ್ರ.ಸಂ | ಲೆಕ್ಕಶೀರ್ಷಿಕೆ | 2024-25ನೇ ಸಾಲಿನ ಆಯವ್ಯಯದಲ್ಲಿ ಒದಗಿಸಿರುವ ಅನುದಾನ |
|---|---|---|
| 1 | 3452-80-104-0-01-059 ಪ್ರಚಾರ ಮತ್ತು ಉತ್ತೇಜನ, ಇತರೆ ವೆಚ್ಚಗಳು | 19.28 |
| 2 | 3452-80-104-0-01-422 ಪರಿಶೀಷ್ಟ ಜಾತಿ ಉಪ ಯೋಜನೆ | 18.43 |
| 3 | 3452-80-104-0-01-423 ಗಿರಿಜನ ಉಪ ಯೋಜನೆ | 12.29 |
| 4 | 3452-80-104-0-04-106 ಪ್ರವಾಸೋದ್ಯಮ ಕಾರ್ಯನೀತಿ ಉತ್ತೇಜನಗಳು ಮತ್ತು ರಿಯಾಯಿತಿಗಳು | 20.00 |
| 5 | 5452-01-101-0-01-132 ವಿವಿಧ ಸ್ಥಳಗಳಲ್ಲಿ ಪ್ರವಾಸೋದ್ಯಮ ಮೂಲಭೂತ ಸೌಕರ್ಯ | 20.00 |
| 6 | 5452-01-101-05-132 ಪ್ರವಾಸೋದ್ಯಮ ಇಲಾಖೆಯಡಿ ಪ್ರವಾಸಿ ತಾಣಗಳಲ್ಲಿ ಪ್ರಧಾನ ಮೂಲಭೂತ ಸೌಕರ್ಯ ಕಾಮಗಾರಿಗಳು | 50.00 |
| 7 | 5452-01-101-0-08-103 ಶ್ರೀ ರೇಣುಕಾ ಯಲ್ಲಮ್ಮಕ್ಷೇತ್ರ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿ, 103-ಸಹಾಯಾನುದಾನ -ಸಾಮಾನ್ಯ | 0.50 |
| 8. | 5452-01-800-0-10-436 ಆರ್.ಐ.ಡಿ.ಎಫ್ ಅಡಿಯಲ್ಲಿ ಪ್ರವಾಸೋದ್ಯಮ ಕ್ಷೇತ್ರಗಳಿಗೆ ರಸ್ತೆಗಳು, 436-ನಬಾರ್ಡ್ ಕಾಮಗಾರಿಗಳು | 4.40 |
| | **ಒಟ್ಟು** | **144.90** |